# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ಹೇರೋಹಳ್ಳಿ ಉಪ-ವಿಭಾಗದ,
ವಾರ್ಡ್ ನಂ.40, ದೊಡ್ಡಬಿದರಕಲ್ಲು, ಕರಿಹೋಬನಹಳ್ಳಿ, ಬೆಂಗಳೂರು-5600 58.

---

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ರಾ.ರಾ.ನಗರ ವಲಯ, ಹೇರೋಹಳ್ಳಿ ಉಪ-ವಿಭಾಗದ ವಾರ್ಡ್ ನಂ.40ರಲ್ಲಿ ದಿನಾಂಕ: 07.08.2021 ರಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.**

**ಈ ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.**

1. ಶ್ರೀ.ಸುಬ್ರಮಣ್ಯ, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ.ಜಿ.ನಾಗಭೂಷಣ್, ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ.
3. ಶ್ರೀ.ಆನಂದ್, ಸಹಾಯಕ ಕಾರ್ಯ ಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
4. ಶ್ರೀ.ಡಿ.ಎಂ.ರಮೇಶ್, ಹಿರಿಯ ಆರೋಗ್ಯ ಪರಿವೀಕ್ಷಕರು.
5. ಶ್ರೀ.ಬಿ.ರಮೇಶ್, ಸಹಾಯಕ ಅಭಿಯಂತರರು, ಯೋಜನೆಗಳ ವಿಭಾಗ.
6. ಶ್ರೀ.ಬೆಟ್ಟೇಶ್ವರ ಗೌಡ, ಎ.ಎಸ್.ಐ , ಪೀಣ್ಯ ಪೋಲೀಸ್ ಠಾಣೆ.
7. ಶ್ರೀ ವಿಜಯ್.ಸಿ, ಕಿರಿಯ ಅಭಿಯಂತರರು ಬೆಸ್ಕಾಂ, ದೊಡ್ಡಬಿದರಕಲ್ಲು.
8. ಶ್ರೀ.ಮುತ್ತೇಗೌಡ, ಕಿರಿಯ ಆರೋಗ್ಯ ಪರಿವೀಕ್ಷಕರು.
9. ಶ್ರೀ.ಬಾಲಕೃಷ್ಣ. ಎ. ಹೆಡ್ ಕಾನ್ಸ್ಟೇಬಲ್, ಬ್ಯಾಡರಹಳ್ಳಿ ಪೋಲೀಸ್ ಠಾಣೆ.
10. ಶ್ರೀ.ಗುರುರಾಜ್.ಎ.ಪೂಜಾರಿ, ಅಸ್ಸೆಸರ್.
11. ಶ್ರೀ.ಆಂಜನಪ್ಪ, ಕಂದಾಯ ಪರಿವೀಕ್ಷಕರು.
12. ಶ್ರೀ.ಸಂತೋಷ್ ಕುಮಾರ್ ಜಿ, ಕಂದಾಯ ವಸೂಲಿಗಾರರು.
13. ಶ್ರೀ.ಅಶ್ವಿನಿ.ಆರ್, ಕಂದಾಯ ವಸೂಲಿಗಾರರು.

**ವಾರ್ಡ್ ಸಮಿತಿ ಸದಸ್ಯರುಗಳು.**

1. ಶ್ರೀ.ಕೂರ್ಲಪ್ಪ, ತಿಗಳರಪಾಳ್ಯ, ಸದಸ್ಯರು.
2. ಶ್ರೀ.ಸತೀಶ್, ಜಿ.ಹೊಸಹಳ್ಳಿ, ಸದಸ್ಯರು.
3. ಶ್ರೀ.ಮಾಲಾತೇಶ್, ದೊಡ್ಡಬಿದರಕಲ್ಲು, ಸದಸ್ಯರು.
4. ಶ್ರೀ.ಮಂಜುನಾಥ್, ಚನ್ನನಾಯಕನಪಾಳ್ಯ, ಸದಸ್ಯರು.
5. ಶ್ರೀ.ಮುನಿನಾರಾಯಣಪ್ಪ, ಇಂದಿರಾನಗರ, ಸದಸ್ಯರು.
6. ಶ್ರೀ.ಗರುಡಪ್ಪ, ತಿಳಗರಪಾಳ್ಯ, ಸದಸ್ಯರು.
7. ಶ್ರೀಮತಿ.ಸುಮಿತ್ರ, ಅಂದ್ರಹಳ್ಳಿ, ಸದಸ್ಯರು.
8. ಶ್ರೀಮತಿ.ಪುಟ್ಟಮ್ಮ, ತಿಗಳರಪಾಳ್ಯ, ಸದಸ್ಯರು.

**ಈ ಕೆಳಕಂಡ ಅಧಿಕಾರಿಗಳು ಸಭೆಯಲ್ಲಿ ಗೈರು ಹಾಜರಾಗಿರುತ್ತಾರೆ.**

1. ಶ್ರೀ.ರಮೇಶ್, ಪಶು ವೈದ್ಯರು.
2. ಶ್ರೀ.ರಂಗಸ್ವಾಮಿ, ಅರಣ್ಯ ಇಲಾಖೆ,
3. ಶ್ರೀ.ಹೆಚ್.ಡಿ.ವೆಂಕಟೇಶ್, ತೋಟಗಾರಿಕೆ ಪರಿವೀಕ್ಷಕರು.
4. ಮೇಘನಾ.ಬಿ.ಕೆ, ಸಹಾಯಕ ಅಭಿಯಂತರರು, ಕೆರೆಗಳ ವಿಭಾಗ, ರಾ.ರಾ.ನಗರ.ವಲಯ.
5. ಶ್ರೀ ಎಂ.ಅಮರನಾಥ್, ಸಹಾಯಕ ಅಭಿಯಂತರರು, ಎಸ್.ಡಬ್ಲ್ಯೂ.ಡಿ.
6. ಶ್ರೀ.ಶಶಿಧರ್, ಕಿರಿಯ ಅಭಿಯಂತರರು, ಬೆಸ್ಕಾಂ, ಅಂದ್ರಹಳ್ಳಿ.
7. ಶ್ರೀಮತಿ ಲಕ್ಷ್ಮಿ ಕೆ ಆರ್, **SWM Plant** ಅಧಿಕಾರಿಗಳು.

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

1) <u>ವಾರ್ಡ್ ವ್ಯಾಪ್ತಿಯಲ್ಲಿನ ಆರೋಗ್ಯ ಇಲಾಖೆ ಬಗ್ಗೆ ಚರ್ಚಿಸಲಾದ ವಿಚಾರ.</u>

- ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು 52 ಬ್ಲಾಕ್‌ಗಳಿಗೆ 52 ಕಸ ಸಂಗ್ರಹಿಸುವ ಆಟೋಗಳಿವೆ. ಹಾಗೂ 3 ಕಾಂಪ್ರೆಸ್ಸರ್ ವಾಹನಗಳಿವೆ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು 139 ಜನ ಪೌರ ಕಾರ್ಮಿಕರು ಕಾರ್ಯ ನಿರ್ವಹಿಸುತ್ತಿರುವುದಾಗಿ ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಗೆ ಸಮಬಂಧಪಟ್ಟಂತೆ ಕಳೆದ 2 ತಿಂಗಳಿನಲ್ಲಿ ಒಟ್ಟು 80 ಜನರಿಗೆ ಕೋವಿಡ್ ಸೊಂಕು ದೃಢಪಟ್ಟಿದೆ. ಹಾಗೂ ಕಳೆದ 2 ತಿಂಗಳಿನಲ್ಲಿ ಯಾವುದೇ ಮರಣಹೊಂದಿದ ಸೊಂಕಿತರು ಇರುವುದಿಲ್ಲ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಈಗಾಗಲೇ ಒಟ್ಟು 33662 ಕೋವಿಡ್ ಲಸಿಕೆಗಳು ಹಂಚಿಕೆಯಾಗಿರುತ್ತದೆ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿದರು.
- ಒಂದೇ ಸ್ಥಳದಲ್ಲಿ 3 ಕ್ಕಿಂತ ಅಧಿಕ ಜನರಿಗೆ ಕೋವಿಡ್ ಸೊಂಕು ಪತ್ತೆಯಾದಲ್ಲಿ ಅಂತಹ ಸ್ಥಳಗಳನ್ನು ಸೀಲ್‌ಡೌನ್ ಮಾಡಲಾಗುವುದು ಎಂದು ಹಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿದರು.

2) ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು

- ವಾರ್ಡ್ ವ್ಯಾಪ್ತಿಯಲ್ಲಿನ ತಿಗಳರಪಾಳ್ಯದ ಸ್ಮಶಾನದಲ್ಲಿರುವ ಘನ ತ್ಯಾಜ್ಯ ಸಂಗ್ರಹಣಾ ಘಟಕಕ್ಕೆ ನೀರು, ವಿದ್ಯುತ್ ಹಾಗು ಉತ್ತಮ ರಸ್ತೆ ಸಂಪರ್ಕ ಕಲ್ಪಿಸಿಕೊಡಲು ಸದರಿ ಜಾಗದ ಸರ್ವೆ ಮಾದಲು ಎ.ಡಿ.ಎಲ್.ಆರ್ ಗೆ ಪತ್ರ ಬರೆಯಲು ಸದಸ್ಯರು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ಎಲ್ಲಾ ನೀರುಗಂಟಿಗಳಿಗೆ, ಮುಖ್ಯರಸ್ತೆಗಳಲ್ಲಿನ ರಸ್ತೆ ಅಗೆತ/ರಿಪೇರಿ ಕಾರ್ಯಗಳನ್ನು ಬೇಗ ಮುಗಿಸಲು ಸೂಚಿಸುವಂತೆ ಸದಸ್ಯರು ತಿಳಿಸಿದರು.
- ಅತೀ ಹೆಚ್ಚು ನೀರಿನ ಅಭಾವ ಇರುವ ಸ್ಥಳಗಳಲ್ಲಿ ಕೊಳವೆ ಬಾವಿಗಳನ್ನು ಕೊರೆಸಲು ಮೊದಲ ಆದ್ಯತೆ ನೀಡಲಾಗುವುದು ಎಂದು ಸಹಾಯಕ ಅಭಿಯಂತರರು ತಿಳಿಸಿದರು.

3) ವಾರ್ಡ್ ವ್ಯಾಪ್ತಿಯಲ್ಲಿನ ಬಿ.ಡಬ್ಲ್ಯೂ.ಎಸ್.ಎಸ್.ಬಿ ಬಗ್ಗೆ ಚರ್ಚಿಸಲಾದ ವಿಷಯಗಳು

- ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ವತಿಯಿಂದ ಅಂದ್ರಹಳ್ಳಿ ಮುಖ್ಯರಸ್ತೆಯಲ್ಲಿ ಕಾವೇರಿ ಪೈಪ್‌ಲೈನ್ ಕಾಮಗಾರಿ ಪ್ರಗತಿಯಲ್ಲಿದ್ದು, ಕಾಮಗಾರಿ ಪೂರ್ಣಗೊಂಡ ಸ್ಥಳಗಳಲ್ಲಿ ವೆಟ್‌ಮಿಕ್ಸ್ ಹಾಕಿ ವಾಹನಗಳ ಓಡಾಟಕ್ಕೆ ಅನುಕೂಲವಾಗುವಂತೆ ರಸ್ತೆಗಳನ್ನು ಸಮತಟ್ಟು ಮಾಡಲು ಸದಸ್ಯರು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ಮುಖ್ಯ ರಸ್ತೆಗಳಿಗೆ ಬಿ.ಬಿ.ಎಂ.ಪಿ ವತಿಯಿಂದ Asphalting ಮಂಜೂರಾಗಿದ್ದು, ಅಗಸ್ಟ್ 15 ರ ಒಳಗೆ ಸೂಚಿಸಿದ ಎಲ್ಲಾ ರಸ್ತೆಗಳ ಒಳಚರಂಡಿ ಕಾಮಗಾರಿಯನ್ನು ಪೂರ್ಣಗೊಳಿಸಬೇಕೆಂದು, ಸದಸ್ಯರು B.W.S.S.B &L&T ಇಂಜಿನಿಯರ್ ಗಳಿಗೆ ಸೂಚಿಸಿದರು.

4) ವಾರ್ಡ್ ವ್ಯಾಪ್ತಿಯಲ್ಲಿನ ಕಂದಾಯ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು

- ವಾರ್ಡ್ ವ್ಯಾಪ್ತಿಯಲ್ಲಿನ ಎಲ್ಲಾ ಸರ್ಕಾರಿ ಜಾಗಗಳನ್ನು ಬಿ.ಬಿ.ಎಂ.ಪಿ ಗೆ ವರ್ಗಾಯಿಸುವಂತೆ ತಹಶೀಲ್ದಾರ್ ರವರಿಗೆ ಮನವಿ ಸಲ್ಲಿಸುವಂತೆ ಸದಸ್ಯರು ಸೂಚಿಸಿದರು.
- ಮುಂದಿನ ಸಭೆಗೆ ದೊಡ್ಡಬಿದರಕಲ್ಲು ವ್ಯಾಪ್ತಿಗೆ ಒಳಪಡುವ ಉಪ-ತಹಶೀಲ್ದಾರ್ ಮತ್ತು ಎ.ಡಿ.ಎಲ್.ಆರ್ ರವರನ್ನು ಆಹ್ವಾನಿಸುವಂತೆ ಸದಸ್ಯರು ಸೂಚಿಸಿದರು.

5) ವಾರ್ಡ್ ವ್ಯಾಪ್ತಿಯಲ್ಲಿನ ಪೋಲೀಸ್ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು

- ವಾರ್ಡ್ ವ್ಯಾಪ್ತಿಯಲ್ಲಿನ ಅಂದ್ರಹಳ್ಳಿ ಸುತ್ತಮುತ್ತಲಿನ ಪ್ರದೇಶಗಳಾದ ಅಕ್ಷರ ಸ್ಕೂಲ್, ದೀಪಕ್ ಸ್ಕೂಲ್ ಹಾಗೂ ಕೆರೆಮುನೇಶ್ವರ ದೇವಸ್ಥಾನದ ಹತ್ತಿರ ಹೆಚ್ಚಿನ ಬೀಟ್‌ಗಳನ್ನು ಇರಿಸಲು ಸದಸ್ಯರು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ಮೀನಾ ಬಾರ್, ಸಂಗಮ್ ಬಾರ್ ಎದುರು ಸಂಜೆ ಸಮಯದಲ್ಲಿ ಟ್ರಾಫಿಕ್ ಸಮಸ್ಯೆ ಹೆಚ್ಚಾಗಿದ್ದು, ಅದನ್ನು ನಿಯಂತ್ರಿಸುವಂತೆ ಸದಸ್ಯರು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ಅಂದ್ರಹಳ್ಳಿಯ ಅರಳಿಮರ ಸರ್ಕಲ್ ಹತ್ತಿರ ಆಟೋಗಳನ್ನು ನಿಯಂತ್ರಿಸುವಂತೆ ಸದಸ್ಯರು ಸೂಚಿಸಿದರು
- ವಾರ್ಡ್ ಪ್ರದೇಶದಿಂದ ನೈಸ್ ರೋಡ್ ಸಂಪರ್ಕ ರಸ್ತೆಗಳ ಗಡಿ ಭಾಗಗಳಲ್ಲಿ ಬೀಟ್ ಗಳನ್ನು ಹಾಕುವಂತೆ ಸೂಚಿಸಿದರು.

6) ವಾರ್ಡ್ ವ್ಯಾಪ್ತಿಯಲ್ಲಿನ ಬೆಸ್ಕಾಂ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು

- ವಾರ್ಡ್ ವ್ಯಾಪ್ತಿಯ ಮೈಸೂರ್‌ಲ್ಯಾಂಪ್ ಬಡಾವಣೆಯಲ್ಲಿ ಈಗಾಗಲೇ ಒಂದು ವಿದ್ಯುತ್ ಕಂಬವನ್ನು ಬದಲಾಯಿಸುವಂತೆ ಕಳೆದ ಸಭೆಗಳಲ್ಲಿ ಸೂಚಿಸಿದ್ದರು ಮತ್ತು ತುರ್ತಾಗಿ ವಿದ್ಯುತ್ ಕಂಬವನ್ನು ಸ್ಥಳಾಂತರಿಸಿ ಸದಸ್ಯರು ಕಿರಿಯ ಅಭಿಯಂತರರಿಗೆ ಸಭೆಯಲ್ಲಿ ತಿಳಿಸಿದರು.

<u>ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು.</u>

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.40, ದೊಡ್ಡಬಿದರಕಲ್ಲು

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.40, ದೊಡ್ಡಬಿದರಕಲ್ಲು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

<u>ಪ್ರತಿಯನ್ನು:-</u>

<u>ಅಧಿಕಾರಿಗಳ ಮಾಹಿತಿಗಾಗಿ</u>

1. ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ. ರವರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ರಾ.ರಾ.ನಗರ ವಲಯ ರವರ ಅವಹಾಹನೆಗಾಗಿ ಮಂಡಿಸಿದೆ
3. ಮುಖ್ಯ ಅಭಿಯಂತರರು, ರಾ.ರಾ.ನಗರ ವಲಯ ರವರ ಅವಹಾಹನೆಗಾಗಿ ಮಂಡಿಸಿದೆ.
4. ಉಪ ನಿಯಂತ್ರಕರು (ಹಣಕಾಸು), ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಕೆಂ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೇ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ರವರ ಮಾಹಿತಿಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಎಸ್.ಡಬ್ಲ್ಯೂ.ಡಿ ರವರ ಮಾಹಿತಿಗಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಟಿ.ಡಬ್ಲ್ಯೂ.ಎಸ್.ಎಸ್.ಟಿ ರವರ ಮಾಹಿತಿಗಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ರವರ ಮಾಹಿತಿಗಾಗಿ ಕಳುಹಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ಯೋಜನೆ ರವರ ಮಾಹಿತಿಗಾಗಿ ಕಳುಹಿಸಿದೆ.
12. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರ ಮಾಹಿತಿಗಾಗಿ ಕಳುಹಿಸಿದೆ
13. ವಲಯ ಅರಣ್ಯಾಧಿಕಾರಿಗಳು, ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆರೆಗಳು ವಿಭಾಗ ರವರ ಮಾಹಿತಿಗಾಗಿ ಕಳುಹಿಸಿದೆ.
15. ತೋಟಗಾರಿಕೆ ಅಧೀಕ್ಷಕರು, ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
16. ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.40, ದೊಡ್ಡಬಿದರಕಲ್ಲು ರವರ ಮಾಹಿತಿಗಾಗಿ ಕಳುಹಿಸಿದೆ.
17. ಪೋಲೀಸ್ ಇನ್ಸ್‌ಪೆಕ್ಟರ್, ಪೀಣ್ಯ/ಬ್ಯಾಡರಹಳ್ಳಿ ರವರ ಮಾಹಿತಿಗಾಗಿ ಕಳುಹಿಸಿದೆ.